**ಸಾಕ್ಷಿಯನ್ನು ದಿಃ 07.01.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ 2 ನೇ ಎದುರುದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಸಂಸ್ಥೆಯವರು ನೀಡಿರುವ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು, ನಿಆರ್. 1 ಎಂದು ಗುರುತಿಸಲಾಯಿತು. ಆದುದರಿಂದ ಅರ್ಜಿಯನ್ನು ವಜಾಗೊಳಿಸಬೇಕಾಗಿ ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

ಅರ್ಜಿದಾರರು ಐ.ಸಿ.ಯು ನಲ್ಲಿದ್ದುಕೊಂಡು ಚಿಕಿತ್ಸೆ ಪಡೆಯುತ್ತಿದ್ದ ಕಾರಣ ದೂರನ್ನು ತಡವಾಗಿ ಸಲ್ಲಿಸಿದ್ದಾರೆ ಎಂದರೆ ಅದು ಸಕರಣ ಅಲ್ಲ ಎನ್ನುತ್ತಾರೆ. ಅಪಘಾತದಲ್ಲಿ ನಾವು ವಿಮೆ ನೀಡಿದ ವಾಹನ ಒಳಗೊಂಡಿದೆ ಎಂದರೆ ಸರಿಯಲ್ಲ. ಪೋಲೀಸ್ ದಾಖಲೆಗಳಲ್ಲಿ ನಾವು ವಿಮೆ ನೀಡಿದ ವಾಹನ ಸಹ ಒಳಗೊಂಡಿದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಮ್ಮ ವಾಹನಕ್ಕೆ ದೋಷರೋಪಣಾ ಪಟ್ಟಿ ಸಲ್ಲಿಸಿಲ್ಲ ಹಾಗೂ ಐ.ಎಂ.ವಿ ವರದಿ ಸಹ ಸಲ್ಲಿಸಿಲ್ಲ ಎನ್ನುತ್ತಾರೆ. ಪರಿಹಾರದ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ನಮ್ಮ ವಾಹನ ಅಪಘಾತದಲ್ಲಿ ಭಾಗಿಯಾಗಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(1 ಮತ್ತು 3 ನೇ ಎದುರುದಾರರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ)

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.